ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಮಂಡ್ಯ ಜಿಲ್ಲೆಯಲ್ಲಿ ಕಲ್ಲು ಗಣಿಗಾರಿಕೆ ಸ್ಥಗಿತಗೊಳಿಸಿದ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

1061 (1239) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯಲ್ಲಿ ಕಲ್ಲು ಗಣಿಗಾರಿಕೆ ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಸರ್ಕಾರಿ ಕಟ್ಟಡ ನಿರ್ಮಾಣ, ಸಾರ್ವಜನಿಕರ ಮನೆ ನಿರ್ಮಾಣ ಕಾಮಗಾರಿಗಳಿಗೆ ತೊಂದರೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದ ಎಲ್ಲಾ ಷರತ್ತುಗಳನ್ನು ಪೂರೈಸಿ, ನ್ಯಾಯಾಲಯದ ಆದೇಶ ಪಡೆದಿರುವ ಗಣಿಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಪುನರ್ ಪರಿಶೀಲಿಸುವುದೇ;

(ಈ) ನಿಯಮಾನುಸಾರ ಎಲ್ಲಾ ಷರತ್ತುಗಳನ್ನು ಪೂರೈಸಿರುವ ಗಣಿಗಾರಿಕೆಗಳಿಗೆ ಯಾವ ಕಾಲಮಿತಿಯಲ್ಲಿ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು?